## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತುರ್ತು ಕಾಮಗಾರಿಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಕಾರ್ಯಪಾಲಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಬೆಂಗಳೂರು ನಗರ ರವರ ಪತ್ರ ಸಂಖ್ಯೆ: ಕಾಅ/ಪಂರಾಇಂ.ವಿ/ಬೆಂನ/ಎಇ.2/2010-11/009 ದಿ:06.04.11

---

ಪೀಠಿಕೆ:

ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವ ಕುರಿತು, ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳಲು ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರರು ಬೆಂಗಳೂರು ನಗರ ಇವರು ಹಲವಾರು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಪ್ರಸ್ತಾಪಿಸಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಜಾಗ್ರತೆಯಾಗಿ ವಿಶೇಷ ಅನುದಾನ ಬಿಡುಗಡೆ ಮಾಡಲು ಸರ್ಕಾರವನ್ನು ವಿನಂತಿಸಿರುತ್ತಾರೆ. ಈಗಾಗಲೇ ಗ್ರಾಅಪಂ.ರಾಜ್ ಇಲಾಖೆಯಿಂದ ಶಾಸಕರ ಕಾರ್ಯಪಡೆಗಳಿಗೆ ಕ್ಷೇತ್ರಾವಾರು ಅನುದಾನ ಬಿಡುಗಡೆ ಮಾಡಿರುವುದರಿಂದ ಮತ್ತು ಕಂದಾಯ ಇಲಾಖೆಯೂ ಸಹ CRF/NCCFನಡಿ ಕುಡಿಯುವ ನೀರಿನ ಪರಿಹಾರ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಿರುವುದರಿಂದ, ಸಧ್ಯಕ್ಕೆ ರೂ.50.00ಲಕ್ಷ ಅನುದಾನವನ್ನು ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ಗೆ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ /21/ ಗ್ರಾನೀಸ (4)/2011 ಬೆಂಗಳೂರು, ದಿನಾಂಕ: 04.06.2011**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನಲೆಯಲ್ಲಿ, ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ನ ಗ್ರಾಮೀಣ ಪ್ರದೇಶಗಳಲ್ಲಿ ತಲೆದೋರಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ಸ್ಥಳೀಯ ಅಗತ್ಯತೆಯನುಸಾರ ಕುಡಿಯುವ ನೀರಿನ ಕಾಮಗಾರಿಗಳನ್ನು ಆದ್ಯತೆ ಮೇಲೆ ಅನುಷ್ಠಾನಗೊಳಿಸಲು ರೂ.50.00ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು 2011-12ನೇ ಸಾಲಿಗೆ ರಾಜ್ಯ ವಲಯದ C&Q ಘಟಕದಡಿ ಬೆಂಗಳೂರು ನಗರ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಅನುಷ್ಠಾನಗೊಳಿಸಿದ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳ ಮಾಹಿತಿಗಾಗಿ ಕಳುಹಿಸುವುದು. ಕಾಮಗಾರಿ ಅನುಷ್ಠಾನಗೊಳಿಸುವ ಮುನ್ನ ಪ್ರಶ್ನಿತ ಕಾಮಗಾರಿಗಳು2011-12ರ ಸಾಲಿನ ಕ್ರಿಯಾಯೋಜನೆಯಡಿ ಸೇರ್ಪಡೆಯಾಗದಿರುವುದನ್ನು ಖಾತ್ರಿ ಪಡಿಸಿಕೊಳ್ಳತಕ್ಕದ್ದು. ಕಾಮಗಾರಿಗಳ ಅನುಷ್ಠಾನಕ್ಕೆ ಮುನ್ನ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದು.

3. ಈ ಅನುದಾನವನ್ನು ರಾಜ್ಯ ವಲಯದ ಲೆಕ್ಕ ಶೀರ್ಷಿಕೆ : 4215-01-102-9-01-059ಯಡಿ ಗಣನೆಗೆ ತೆಗೆದುಕೊಂಡು, RTGS ಮುಖೇನ ಈಗಾಗಲೇ Coverage & Qualityಯಡಿ ಗೊತ್ತುಪಡಿಸಿರುವ SWSM ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. ಸದರಿ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು CE/PRED ಹಾಗೂ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ IMISನಲ್ಲಿ ದಾಖಲಿಸತಕ್ಕದ್ದು.

4. ಈ ಆದೇಶವನ್ನು ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ: FD 149 Exp.6/2011,ದಿ:8.03.2011 ಹಾಗೂ ಗ್ರಾಅಪಂ.ರಾಜ್ ಇಲಾಖೆಯ IFAರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ/03/ಆಂ.ಆ.ಸ/2011, ದಿ:1.04.2011ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು :

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು–1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ,ಧಾರವಾಡ
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ, ಆಪ್ತ ಕಾರ್ಯದರ್ಶಿ ,ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
9. ವಿಶೇಷಾಧಿಕಾರಿ(ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು–1.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ(6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್‌ರು, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ, 4ನೇ ಮಹಡಿ, ನಂ.55, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
12. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ.
13. ಜಿಲ್ಲಾಪಂಚಾಯತ್ ಅಧ್ಯಕ್ಷರು, ಬೆಂಗಳೂರು ನಗರ.
14. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು ಬೆಂಗಳೂರು ನಗರ.
15. ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ.
16. ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರು, ಬೆಂಗಳೂರು.
17. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್, ಬೆಂಗಳೂರು ನಗರ.
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED ಬೆಂಗಳೂರು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂರಾ) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು, KRWSSA ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, / ಅಪರ ನಿರ್ದೇಶಕರು, ಆರ್ಥಿಕ – KRWSSA , RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ ಕರ್ನಾಟಕ ವಿಕಾಸ ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
25. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
26. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.